**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.572/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಪುಟ್ಟಯ್ಯ | ಪ್ರಾಸಾ-2 |
| ತಂದೆಯ ಹೆಸರು | : ವೆಂಕಪ್ಪ | ಚಾಸಾ-3 |
| ವಯಸ್ಸು | : 44 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಚಾಲಕ | ದಿನಾಂಕಃ 04.08.2025 |
| ವಾಸಸ್ಥಳ | : ಕುದುರೆಮುಖ | |

**:ಮುಖ್ಯ ವಿಚಾರಣೆ ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ಚಾಸಾ-1 ಮತ್ತು 2 ರವರ ಪರಿಚಯ ನನಗಿದೆ.

ಸಾಕ್ಷಿಯು ನಿಪಿ-3 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದು, ಅದನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-4 ಮತ್ತು 5 ರಲ್ಲಿ ತಮ್ಮ ಇರುವಿಕೆಯ ಬಗ್ಗೆ ಗುರುತಿಸಿರುತ್ತಾರೆ.

1 ವರ್ಷದ ಹಿಂದೆ ಮ.11.30 ರ ಸಮಯದಲ್ಲಿ ನಾನು ನನ್ನ ವಯಕ್ತಿಕ ವಿಷಯದ ಕುರಿತು ಪೋಲಿಸ್ ಠಾಣೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ನಿಪಿ-3 ಕ್ಕೆ ಸಹಿಯನ್ನು ಮಾಡಿರುತ್ತೇನೆ. ಯಾವ ವಿಷಯದ ಕುರಿತು ಸಹಿ ಮಾಡಿರುತ್ತೇನೆ ಎಂದು ನನಗೆ ತಿಳಿದಿರುವುದಿಲ್ಲ. ಯಾವ ವಿಚಾರಾಕ್ಕೆ ನಮ್ಮ ಸಹಿಯನ್ನು ಪಡೆದಿರುತ್ತಾರೆ ಎಂದು ನನಗೆ ತಿಳಿದಿರುವುದಿಲ್ಲ. ಸದರಿ ಸಮಯದಲ್ಲಿ ನಾನು ಮತ್ತು ಚಾಸಾ-2 ರವರು ನಿಪಿ-3 ಕ್ಕೆ ಸಹಿ ಮಾಡಿರುತ್ತೇವೆ. ನಿಪಿ-4 ಮತ್ತು 5 ನ್ನು ಪೋಲಿಸ್ ಠಾಣೆಯ ಬಳಿಯಲ್ಲಿಯೇ ತೆಗೆಯಲಾಗಿರುತ್ತದೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**ಪಾಟೀ ಸವಾಲು: ಪ್ರಾಜ್ಞ್ಯಾ ಸ.ಸ.ಅ. ರವರಿಂದ:**

ದಿ.21.10.2023 ರಂದು ಸಂಸೆ ಗ್ರಾಮದ ಚಾಸಾ-1 ರವರ ನಿವಾಸದ ಬಳಿ ನಿಪಿ-3 ಕ್ಕೆ ಸಹಿ ಮಾಡಿರುತ್ತೇನೆ ಎಂದರೆ ನನಗೆ ತಿಳಿದಿರುವುದಿಲ್ಲ. ಚಾಸಾ-1 ರವರ ಮನೆಯಲ್ಲಿ ಕಳ್ಳತನವಾಗಿರುವ ಬಾಬ್ತು ಪೋಲಿಸರು ಜರುಗಿಸಿದ ಮಹಜರ್ ಕ್ರಮಕ್ಕೆ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ದಿನ ಸ.6.00 ರಿಂದ 7.00 ರ ಸಮಯದಲ್ಲಿ ನಾನು ಮತ್ತು ಚಾಸಾ-2 ರವರ ನಿಪಿ-3 ಕ್ಕೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಸಮಯದಲ್ಲಿ ಚಾಸಾ-1 ರವರು ಕಳ್ಳತನವಾಗಿರುವ ಬಾಬ್ತು ಪೋಲಿಸರಿಗೆ ಸ್ಥಳವನ್ನು ತೋರಿಸಿದ ಮೇರೆಗೆ ನಿಪಿ-4 ಮತ್ತು 5 ರಂತೆ ಪೋಟೋವನ್ನು ತೆಗೆಯಲಾಗಿರುತ್ತದೆ ಎಂದರೆ ಸರಿಯಲ್ಲ. ಸಾಮಾನ್ಯವಾಗಿ ಯಾವುದಾದರು

ದಾಖಲೆಗೆ ಸಹಿ ಮಾಡುವ ಮುನ್ನ ಅದನ್ನು ಓದಿ ತಿಳಿಯಬೇಕು ಎಂಬ ವ್ಯವಹಾರಿಕ ಜ್ಞಾನ ಇದೆಯಾ ಎಂದರೆ ಹೌದು ಎಂದು ನುಡಿಯುತ್ತಾರೆ. ಸದರಿ ಮಹಜರ್ ಕ್ರಮದ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.